ಸಮಸ್ತ ಕನ್ನಡಿಗರ ಏಕೈಕ ಸಂಜೆ ದಿನಪತ್ರಿಕೆ
ಈ ಸಂಜೆ

# ಅನಿವಾಸಿತನ-ಕನ್ನಡ ಪ್ರಜ್ಞೆ: ಅಂತಾರಾಷ್ಟ್ರೀಯ ವಿಚಾರ ಸಂಕಿರಣ

**ಬೆಂಗಳೂರು, ಜ.22-** ಕೆ.ಎಸ್.ನರಸಿಂಹಸ್ವಾಮಿ ಟ್ರಸ್ಟ್ ಮತ್ತು ಜೈನ್ ವಿಶ್ವವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ಫೆ.4ರಂದು ಅನಿವಾಸಿತನ ಮತ್ತು ಕನ್ನಡ ಪ್ರಜ್ಞೆ ಎಂಬ ವಿಷಯದ ಬಗ್ಗೆ ಅಂತಾರಾಷ್ಟ್ರೀಯ ವಿಚಾರ ಸಂಕಿರಣವನ್ನು ಆಯೋಜಿಸಲಾಗಿದೆ.

ವಿಚಾರ ಸಂಕೀರಣದಲ್ಲಿ ಅಮೆರಿಕಾದ ಅಣು ಸಂಶೋಧನಾ ಕೇಂದ್ರದಲ್ಲಿ ಕೆಲಸ ನಿರ್ವಹಿಸಿ ನಿವೃತ್ತರಾದ ಹಾಗೂ ಕನ್ನಡ ಸಾಹಿತ್ಯರಂಗದ ಅಧ್ಯಕ್ಷರಾದ ಎಂ.ಎಸ್.ನಟರಾಜ್, ನಾಗ ಐತಾಳ್, ನಳಿನಿಮಯ್ಯ, ಡಾ.ಶಶಿಕುಮಾರ್, ಲಕ್ಷ್ಮೀಶ ತೋಳ್ಪಾಡಿ, ಕೆ.ಸತ್ಯನಾರಾಯಣ ಮುಂತಾದವರು ಪ್ರಬಂಧ ಮಂಡಿಸಲಿದ್ದಾರೆ.

ಟ್ರಸ್ಟ್ ಅಧ್ಯಕ್ಷ ಡಾ.ನರಹಳ್ಳಿ ಬಾಲಸುಬ್ರಹ್ಮಣ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ಪ್ರತಿನಿಧಿಗಳಾಗಿ ಭಾಗವಹಿಸುವವರು ಹೆಚ್ಚಿನ ಮಾಹಿತಿಗೆ ನ.ರವಿಕುಮಾರ್ ಮೊ: 9448804908, 9449050348ಗೆ ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.